## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೋವಿಡ್-19 ಹಿನ್ನೆಲೆಯಲ್ಲಿ ಲಾಕ್‌ಡೌನ್ ಆದೇಶಿಸಿರುವುದರಿಂದ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರಿಗೆ ರೂ.5,000/-ಗಳ ಪರಿಹಾರ ಧನವನ್ನು ನೀಡುವ ಬಗ್ಗೆ – ಆದೇಶ.

**ಉಲ್ಲೇಖ:**
1. ಸರ್ಕಾರದ ಕಾರ್ಯದರ್ಶಿ (ಆ&ಸಂ), ಆರ್ಥಿಕ ಇಲಾಖೆ ಇವರ ಟಿಪ್ಪಣಿ ಸಂಖ್ಯೆ:ಆಇ/ 08/ ಉಕಾ (ಆ ಮತ್ತು ಸಂ) / 2020, ದಿನಾಂಕ:06-05-2020.
2. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪತ್ರ ಸಂಖ್ಯೆ: ರಾಸಾಪ್ರಾ-1ಬಿ/ ಪಿಆರ್-905/ 2019-20, ದಿನಾಂಕ:06-05-2020.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಾರಿಗೆ ಇಲಾಖೆ ಇವರ ಅ.ಸ ಪತ್ರ ಸಂಖ್ಯೆ:ಟಿಡಿ 121 ಟಿಡಿಒ 2020, ದಿನಾಂಕ:08-05-2020.

****

**ಪ್ರಸ್ತಾವನೆ:**

ಓದಲಾದ ಕ್ರಮ ಸಂಖ್ಯೆ (1) ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ, ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ, ಕೋವಿಡ್-19 ಹಿನ್ನೆಲೆಯಲ್ಲಿ ಲಾಕ್‌ಡೌನ್ ಆದೇಶಿಸಿರುವುದರಿಂದ ಪರಿಹಾರವಾಗಿ ಮಾನ್ಯ ಮುಖ್ಯಮಂತ್ರಿಯವರು ಕೆಲವು ಘೋಷಣೆಗಳನ್ನು ಮಾಡಿರುತ್ತಾರೆಂದು ತಿಳಿಸಲಾಗಿರುತ್ತದೆ. ಆ ಪೈಕಿ ಸಾರಿಗೆ ಇಲಾಖೆಯ ವ್ಯಾಪ್ತಿಯಡಿ ಬರುವ "ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರು ತಮ್ಮ ದೈನಂದಿನ ಉದ್ಯೋಗವನ್ನು ನಡೆಸಲಾಗದೇ ತಮ್ಮ ಆದಾಯವನ್ನು ಕಳೆದುಕೊಂಡಿರುತ್ತಾರೆ. ನಮ್ಮ ರಾಜ್ಯದಲ್ಲಿರುವ ಇಂತಹ 7,75,000 ಚಾಲಕರಿಗೆ ಒಂದು ಬಾರಿ ಪರಿಹಾರವಾಗಿ ರೂ.5,000/- ಗಳನ್ನು ನೀಡಲು ನಿರ್ಧರಿಸಲಾಗಿದೆ" ಎಂದು ಘೋಷಿಸಲಾಗಿದೆ.

ಓದಲಾದ ಕ್ರಮ ಸಂಖ್ಯೆ (2) ರ ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪತ್ರದಲ್ಲಿ, ಕೋವಿಡ್-19 ಹಿನ್ನೆಲೆಯಲ್ಲಿ ಲಾಕ್‌ಡೌನ್ ಪ್ರಯುಕ್ತ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರಿಗೆ ರೂ.5,000/-ಗಳ ಪರಿಹಾರ ಧನವನ್ನು ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲು ವಿಧಿಸಬಹುದಾದ ಷರತ್ತು ಮತ್ತು ನಿಬಂಧನೆಗಳನ್ನು ಉಲ್ಲೇಖಿಸಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಓದಲಾದ ಕ್ರಮ ಸಂಖ್ಯೆ (3)ರ ಸರ್ಕಾರದ ಅ.ಸ ಪತ್ರದಲ್ಲಿ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರುಗಳಿಗೆ ಪರಿಹಾರ ಧನ ನೀಡುವ ಸಲುವಾಗಿ ಅರ್ಹ ಫಲಾನುಭವಿಗಳಿಂದ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸ್ವೀಕರಿಸಲು ಹಾಗೂ ಆನ್‌ಲೈನ್ ಮುಖಾಂತರ ಪರಿಹಾರ ಪಾವತಿಸಲು "ಸೇವಾಸಿಂಧು" ವೆಬ್‌ಪೋರ್ಟಲ್‌ನಲ್ಲಿ ಸೂಕ್ತ ವ್ಯವಸ್ಥೆ ಮಾಡುವಂತೆ ಸಿ.ಆ.ಸು (ಇ-ಆಡಳಿತ) ಇಲಾಖೆಯನ್ನು ಕೋರಲಾಗಿದೆ.

....2

Scanned with CamScanner

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಟಿಡಿ 121 ಟಿಡಿಒ 2020,**
**ಬೆಂಗಳೂರು, ದಿನಾಂಕ:16-05-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ವಯ, ಸರ್ಕಾರವು, ಕೋವಿಡ್-19 ಹಿನ್ನೆಲೆಯಲ್ಲಿ ಲಾಕ್‌ಡೌನ್ ಆದೇಶಿಸಿರುವುದರಿಂದ ದೈನಂದಿನ ಉದ್ಯೋಗವನ್ನು ನಡೆಸಲಾಗದೆ ಆದಾಯ ಕಳೆದುಕೊಂಡಿರುವ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರಿಗೆ ಮಾತ್ರ ಒಂದು ಬಾರಿ ಪರಿಹಾರವಾಗಿ ರೂ.5000/- ( ಐದು ಸಾವಿರ ರೂಪಾಯಿಗಳು ಮಾತ್ರ) ಗಳ ಪರಿಹಾರ ಧನವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನೀಡಲು ಮಂಜೂರಾತಿ ನೀಡಿ ಆದೇಶಿಸಿದೆ.

1. ಎಲ್ಲಾ ಅರ್ಜಿಗಳು ಸೇವಾ ಸಿಂಧು ಪೋರ್ಟಲ್ ಮೂಲಕವೇ ಸ್ವೀಕೃತವಾಗತಕ್ಕದ್ದು.
2. ದಿನಾಂಕ:24-03-2020 ರಂದು ಚಾಲನೆ ಪರವಾನಗಿ ಪ್ರಮಾಣ ಪತ್ರ (Driving License) ಮತ್ತು ಸುಸ್ಥಿತಿ ಪ್ರಮಾಣ ಪತ್ರ (Fitness Certificate) ಹೊಂದಿದ್ದ ವಾಹನಗಳಿಗೆ ಮಾತ್ರ ಅನ್ವಯಿಸತಕ್ಕದ್ದು. ದಿನಾಂಕ: 24-03-2020 ರಂದು ಚಾಲ್ತಿಯಲ್ಲಿದ್ದ ಚಾಲಕರ ಪರವಾನಗಿ (Driving License) ಸಂಖ್ಯೆಗಿಂತ ಹೆಚ್ಚು ಫಲಾನುಭವಿಗಳಿಲ್ಲದಂತೆ ಖಚಿತಪಡಿಸಿಕೊಳ್ಳತಕ್ಕದ್ದು.
3. ಆಧಾರ್ ಕಾರ್ಡ್/ ಚಾಲನಾ ಪರವಾನಗಿ / ವಾಹನ ನೋಂದಣಿ ಸಂಖ್ಯೆ ಮೂರು ಅಂಶಗಳು ಎಲ್ಲಾ ಫಲಾನುಭವಿಗಳಿಗೆ ಅನನ್ಯವಾಗಿರುವುದು ಕಡ್ಡಾಯವಾಗಿರತಕ್ಕದ್ದು.
4. ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ಮಾತ್ರ ಅನ್ವಯವಾಗತಕ್ಕದ್ದು. ಮ್ಯಾಕ್ಸಿ ಕ್ಯಾಬ್‌ಗಳಿಗೆ ಅನ್ವಯಿಸುವುದಿಲ್ಲ.
5. ಪರಿಹಾರ ಧನವು ಕೇವಲ ಅನುಜ್ಞಾ ಪತ್ರವನ್ನು ಹೊಂದಿರುವ ಹಾಗೂ ಅಗತ್ಯವಿರುವ ಚಾಲಕರ ಬ್ಯಾಂಕ್ ಖಾತೆಗೆ DBT ಮುಖಾಂತರವೇ ಸಂದಾಯವಾಗಬೇಕು.
6. ಒಂದು ವೇಳೆ ಆಟೋ / ಟ್ಯಾಕ್ಸಿ ಮಾಲೀಕರಿಗೆ ಸಂದಾಯವಾದಲ್ಲಿ ಕೆಲವೊಂದು ಮಾಲೀಕರು ಹೆಚ್ಚಿನ ಸಂಖ್ಯೆಯ ಆಟೋ/ ಟ್ಯಾಕ್ಸಿಗಳನ್ನು ಹೊಂದಿದ್ದು ಅವರಿಗೆ ಪರಿಹಾರ ಧನ ಸಂದಾಯವಾದಲ್ಲಿ ಜೀವನ ನಿರ್ವಹಣೆಯನ್ನು ಎದುರಿಸುತ್ತಿರುವ ಚಾಲಕರಿಗೆ ಸಿಗದಂತೆಯಾಗುತ್ತದೆ. ಆದುದರಿಂದ Duplication or double payment ಆಗದಂತೆ, ಅವರುಗಳ ಆಧಾರ್/ಪ್ಯಾನ್ ಕಾರ್ಡ್ ಬ್ಯಾಂಕ್ ಖಾತೆಗೆ ಅನನ್ಯವಾಗಿ ಲಿಂಕ್ ಆಗಿರುವ ಬಗ್ಗೆ ಗಮನಹರಿಸಿ ವರ್ಗಾಯಿಸತಕ್ಕದ್ದು.
7. ಈ ಹಂತದಲ್ಲಿ ಸರ್ಕಾರ ಮತ್ತು ಫಲಾನುಭವಿಗಳ ನೇರ ಸಂಪರ್ಕವಿರತಕ್ಕದ್ದು, ಯಾವುದೇ ಮಧ್ಯಂತರ ಸಂಪರ್ಕ ಇರಬಾರದು.

ಕೆಲವೊಮ್ಮೆ ಫಲಾನುಭವಿಗಳ ಆರ್ಥಿಕ ಸ್ಥಿತಿ ಉತ್ತಮವಾಗಿದ್ದು, ಅವರುಗಳಿಗೆ ಪರಿಹಾರ ನೀಡುವ ಅಗತ್ಯತೆಯ ಬಗ್ಗೆ ಗಮನಹರಿಸಿ, ಅರ್ಹ ಫಲಾನುಭವಿಗಳಿಂದ ಲಾಕ್‌ಡೌನ್ ಅವಧಿಯಲ್ಲಿ ಆರ್ಥಿಕ ಸ್ಥಿತಿ ಸದೃಢವಾಗಿಲ್ಲದಿರುವ ಬಗ್ಗೆ ಸ್ವಯಂ ದೃಢೀಕರಣ ಪಡೆದು ಪರಿಹಾರ ನೀಡಲು ಅಗತ್ಯ ಕ್ರಮವಹಿಸತಕ್ಕದ್ದು.

ಎಂ. ಶಿಲ್ಪಾವತಿ

...3

Scanned with CamScanner

ಮೇಲಿನ ಷರತ್ತು ಮತ್ತು ನಿಬಂಧನೆಗಳನ್ನು ಗಣನೆಗೆ ತೆಗೆದುಕೊಂಡು ಸೇವಾ ಸಿಂಧು ಪೋರ್ಟಲ್ ಮುಖಾಂತರ ಯೋಜನೆಯನ್ನು ಅನುಷ್ಠಾನಗೊಳಿಸಲು ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರು ಅಗತ್ಯ ಕ್ರಮ ವಹಿಸತಕ್ಕದ್ದು.

ಈ ವೆಚ್ಚವನ್ನು 2020-21ನೇ ಆಯವ್ಯಯದ ಲೆಕ್ಕ ಶೀರ್ಷಿಕೆ 3055-00-800-0-15 ಅಡಿಯಲ್ಲಿ ಒದಗಿಸಿರುವ ರೂ.20.00 ಕೋಟಿಗಳಡಿಯಲ್ಲಿ ಭರಿಸಲು ಬಿಡುಗಡೆಗೊಳಿಸಿದೆ ಹಾಗೂ ನಂತರ ಅವಶ್ಯಕ್ಕೆ ತಕ್ಕಂತೆ ಹೆಚ್ಚುವರಿ ಅನುದಾನವನ್ನು ಒದಗಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 188 ವೆಚ್ಚ 11/2020 (ಇ-ಆಫೀಸ್) ದಿನಾಂಕ: 14-05-2020 ಮತ್ತು ದಿನಾಂಕ:16-05-2020ರಲ್ಲಿ ನೀಡಿರುವ ಸಹಮತಿಗಳನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಎಂ. ಸತ್ಯವತಿ 16/05/2020
(ಎಂ. ಸತ್ಯವತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.
16.05

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ)/(ಇ & ಆರ್ಎಸ್ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398 ಹಾಗೂ ಪ್ರಧಾನ ಮಹಾಲೇಖಪಾಲರು (ಎ &ಇ), ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5359, ಬೆಂಗಳೂರು-560001.
2. ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿ.ಆ.ಸು ಇಲಾಖೆ (ಇ-ಆಡಳಿತ), ಬಹುಮಹಡಿ ಕಟ್ಟಡ, ಬೆಂಗಳೂರು.
5. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಟಿಟಿಎಂಸಿ ಸಂಕೀರ್ಣ, ಶಾಂತಿನಗರ, ಬೆಂಗಳೂರು.
6. ಆಯುಕ್ತರು, ಖಜಾನೆ-2, ಗಾಂಧಿನಗರ, ಬೆಂಗಳೂರು-560009.
7. ಹೆಚ್ಚುವರಿ ನಿರ್ದೇಶಕರು, ಖಜಾನೆ-2 ಟಿ.ಎನ್.ಎಂ.ಸಿ , ಖನಿಜಭವನ, ಬೆಂಗಳೂರು.
8. ನಿರ್ದೇಶಕರು, ಇ.ಡಿ.ಸಿ.ಎಸ್, ಸಿ.ಆ.ಸುಇಲಾಖೆ (ಇ-ಆಡಳಿತ), ಕಸ್ತೂರ ಬಾ ರಸ್ತೆ, ಬೆಂಗಳೂರು.

...4

Scanned with CamScanner

9. ಎಲ್ಲಾ ಅಪರ ಸಾರಿಗೆ ಆಯುಕ್ತರು / ಜಂಟಿ ಸಾರಿಗೆ ಅಯುಕ್ತರು:- ಸಾರಿಗೆ ಆಯುಕ್ತರ ಮುಖಾಂತರ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಜಿ. ಪಂ.), ವಿಧಾನಸೌಧ, ಬೆಂಗಳೂರು.
11. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
12. ಎಲ್ಲಾ ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿ / ಪ್ರಾದೇಶಿಕ ಸಾರಿಗೆ ಅಧಿಕಾರಿ / ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿ:- ಸಾರಿಗೆ ಆಯುಕ್ತರ ಮುಖಾಂತರ.
13. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬೆಂಗಳೂರು.
14. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬೆಂಗಳೂರು.
15. ಹೆಚ್ಚುವರಿ ಪ್ರತಿಗಳು / ಶಾಖಾ ರಕ್ಷಾ ಕಡತ / ಒ.ಡಿ.ಜಿ.ಸಿ.

*********

Scanned with CamScanner